ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ ಹಂತ 4ರ ಕಾಮಗಾರಿಗಳ ಕುರಿತು

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

44 (306) ಮಾನ್ಯ ಉಪ ಮುಖ್ಯಮಂತ್ರಿಗಳು ಮತ್ತು ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) 2018-2019ನೇ ಸಾಲಿನಲ್ಲಿ ಎಸ್.ಹೆಚ್.ಡಿ.ಪಿ. ರಡಿ ಹಂತ 4ರ ಘಟ್ಟ-1, ಘಟ್ಟ-2 ಹಾಗೂ ಘಟ್ಟ-3ರಲ್ಲಿ ಅನುಮೋದನೆ ನೀಡಲಾದ ಒಟ್ಟು ಕಾಮಗಾರಿಗಳ ಸಂಖ್ಯೆ ಹಾಗೂ ಅಂದಾಜು ಮೊತ್ತ ಎಷ್ಟು ; (ಘಟ್ಟವಾರು ಹಾಗೂ ವಿಧಾನಸಭಾ ಕ್ಷೇತ್ರವಾರು ಪ್ರತ್ಯೇಕವಾಗಿ ವಿವರ ನೀಡುವುದು)

(ಆ) ಇದರಲ್ಲಿ ತಡೆಹಿಡಿಯಲಾದ ಕಾಮಗಾರಿಗಳ ಸಂಖ್ಯೆ ಹಾಗೂ ಅಂದಾಜು ಮೊತ್ತ ಎಷ್ಟು ; (ವಿಧಾನಸಭಾ ಕ್ಷೇತ್ರವಾರು ಹಾಗೂ ಘಟ್ಟವಾರು ಪ್ರತ್ಯೇಕವಾಗಿ ವಿವರ ನೀಡುವುದು)

(ಇ) ಸದರಿ ಕಾಮಗಾರಿಗಳನ್ನು ತಡೆಹಿಡಿಯಲು ಕಾರಣಗಳೇನು ;

(ಈ) ತಡೆಹಿಡಿಯಲ್ಪಟ್ಟ ಕಾಮಗಾರಿಗಳ ಪ್ರಕ್ರಿಯೆ ಮುಂದುವರೆಸಲು ಯಾವಾಗ ಆದೇಶ ನೀಡಲಾಗುವುದು ?